ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಬ್ರಾಹ್ಮಣ ಸಮುದಾಯದ ಹಿಂದುಳಿದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಕಾಲಾವಧಿಯ ಬಗ್ಗೆ

ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-

248 (196) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ ಯಾವ ದಿನಾಂಕದಿಂದ ನೀಡಲಾಗುತ್ತದೆ;

(ಆ) ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಯಾವ ಮಾನದಂಡದ ಆಧಾರದ ಮೇಲೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಕನಿಷ್ಠ ಕಾಲಮಿತಿ ನಿಗದಿಗೊಳಿಸಲಾಗಿದೆ; ಹಾಗೂ ಇತರೆ ಸಮುದಾಯದವರಿಗೆ ಯಾವ ಮಾನದಂಡಗಳ ಆಧಾರದ ಮೇಲೆ ಗರಿಷ್ಠ ಕಾಲಮಿತಿ ನಿಗಧಿಗೊಳಿಸಲಾಗಿದೆ; (ವಿವರ ನೀಡುವುದು)

(ಇ) ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೂ ಜೀವಿತಾವಧಿಯವರೆಗೆ ಜಾತಿ ಪ್ರಮಾಣ ಪತ್ರ ಮತ್ತು ಕನಿಷ್ಟ 5 ವರ್ಷಗಳವರೆಗೆ ಆದಾಯ ಪ್ರಮಾಣಪತ್ರಗಳನ್ನು ನೀಡುವ ಪ್ರಸ್ತಾವವು ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)